ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ-571201

ಕರ್ನಾಟಕ ಸರ್ಕಾರ

ಕಛೇರಿ: 08272-225500
ನಿವಾಸ: 08272-225700
ಫ್ಯಾಕ್ಸ್: 08272-225900
ಈ-ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರವಿ./ 4 /2018-19 ದಿನಾಂಕ: 26-08-2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಉಂಟಾಗಿರುವ ತುರ್ತು ಪರಿಸ್ಥಿತಿ ಹಿನ್ನಲೆಯಲ್ಲಿ ನಿಯೋಜಿಸಲಾಗಿರುವ ನೆರೆಯ ಜಿಲ್ಲೆಯ ಅಧಿಕಾರಿ / ಸಿಬ್ಬಂದಿಗಳನ್ನು ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಜಿಲ್ಲಾಧಿಕಾರಿಯವರು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ರವರ ಅಧಿಕೃತ ಜ್ಞಾಪನ ಸಂಖ್ಯೆ: ಸಿಎಎಲ್(1)ಸಿಆರ್:160/2017-18, ದಿ: 18.08.2018

2) ಜಿಲ್ಲಾಧಿಕಾರಿಯವರು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ರವರ ಪತ್ರ ಮತ್ತು ಅಧಿಕೃತ ಜ್ಞಾಪನ ಸಂಖ್ಯೆ: ಸಿಎಎಲ್(1)ಸಿಆರ್:160/ 2017-18, ದಿ: 25.08.2018

---

ಕೊಡಗು ಜಿಲ್ಲೆಯಲ್ಲಿ ಭಾರೀ ಗಾಳಿ ಮಳೆಯಿಂದ ಮಡಿಕೇರಿ ನಗರದ ಸುತ್ತಮುತ್ತ ಹಾಗೂ ಜಿಲ್ಲೆಯ ಹಲವೆಡೆ ಜಲಾವೃತ ಮತ್ತು ಭೂಕುಸಿತದಿಂದ ಮಾನವ/ ಜಾನುವಾರು ಜೀವಹಾನಿ, ಮನೆಹಾನಿ, ರಸ್ತೆಹಾನಿ ಸೇರಿದಂತೆ ಹಲವು ನಷ್ಟಗಳು ಆಗಿರುತ್ತದೆ. ಈ ಸಂಬಂಧ ಪರಿಹಾರ ಕಾರ್ಯದಲ್ಲಿ ಕೊಡಗು ಜಿಲ್ಲಾಡಳಿತಕ್ಕೆ ಸಹಕರಿಸಲು ಉಲ್ಲೇಖ(1)ರ ಅಧಿಕೃತ ಜ್ಞಾಪನದಂತೆ ಜಿಲ್ಲಾಧಿಕಾರಿಯವರು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ರವರು ಕಂದಾಯ ಇಲಾಖೆಯ 10 ಅಧಿಕಾರಿ / ಸಿಬ್ಬಂದಿಗಳನ್ನು ನಿಯೋಜಿಸಿರುತ್ತಾರೆ. ನಿಯೋಜಿತ ಅಧಿಕಾರಿ/ಸಿಬ್ಬಂದಿಗಳು ದಿನಾಂಕ 18.08.2018ರ ಅಪರಾಹ್ನದಿಂದ ಈವರೆವಿಗೂ ಸಮರೋಪಾದಿಯಲ್ಲಿ ಮತ್ತು ಪ್ರಶಂಸನೀಯ ರೀತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತಾರೆ.

ಪ್ರಸ್ತುತ, ಉಲ್ಲೇಖ(2)ರ ಅಧಿಕೃತ ಜ್ಞಾಪನದಂತೆ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ 10 ಅಧಿಕಾರಿ / ಸಿಬ್ಬಂದಿಗಳ ತಂಡದ ಬದಲಾಗಿ 10 ಅಧಿಕಾರಿ / ಸಿಬ್ಬಂದಿಗಳ ತಂಡವನ್ನು ನಿಯೋಜಿಸಲಾಗಿರುತ್ತದೆ. ಆದುದರಿಂದ, ಉಲ್ಲೇಖ(1)ರ ಅಧಿಕೃತ ಜ್ಞಾಪನದಂತೆ ತಾತ್ಕಾಲಿಕವಾಗಿ ಈ ಜಿಲ್ಲೆಗೆ ನಿಯೋಜಿಸಲ್ಪಟ್ಟಿದ್ದ ಚಾಮರಾಜನಗರ ಜಿಲ್ಲೆ ಕಂದಾಯ ಘಟಕದ ಸಿಬ್ಬಂದಿಗಳನ್ನು ದಿನಾಂಕ 26.08.2018ರ ಪೂರ್ವಾಹ್ನದಂದು ಕರ್ತವ್ಯದಿಂದ ಬಿಡುಗಡೆಗೊಳಿಸಿದೆ.

(ಕ.ಟಿ.ಜಿ.ಅ.ಮೇ.)

ಅಪರ ಜಿಲ್ಲಾಧಿಕಾರಿ,
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು: 1. ಜಿಲ್ಲಾಧಿಕಾರಿಯವರು, ಚಾಮರಾಜನಗರ ಜಿಲ್ಲೆ, ಚಾಮರಾಜನಗರ ರವರಿಗೆ ಧನ್ಯವಾದಗಳೊಂದಿಗೆ ಕಳುಹಿಸಿದೆ.

2. ಸಂಬಂಧಪಟ್ಟ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಅಗತ್ಯ ಕ್ರಮಕ್ಕಾಗಿ.

Received 26/8/18